**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ 25 ಇಎಸ್‌ಟಿ 4(ಎ) 2014 /1388

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560001,
ದಿನಾಂಕ: 25.07.2014.

**ಸುತ್ತೋಲೆ**

ವಿಷಯ:- ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳ ಜೇಷ್ಠತಾ ಪಟ್ಟಿಯನ್ನು ಕಳುಹಿಸಿಕೊಡುವ ಬಗ್ಗೆ.

*-*-*-*-*

ತಾಂತ್ರಿಕ ಶಿಕ್ಷಣ ಇಲಾಖೆಯ ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳ ಜೇಷ್ಠತಾ ಪಟ್ಟಿಯನ್ನು (ಪ್ರತಿ ವರ್ಷದ ಜನವರಿ ತಿಂಗಳಿನಲ್ಲಿ ಇರುವಂತೆ) ಸಿದ್ಧಪಡಿಸಿ ನಿರ್ದೇಶನಾಲಯಕ್ಕೆ ಸಲ್ಲಿಸಬೇಕೆಂದು ಈ ಹಿಂದೆಯೇ ನಿರ್ದೇಶನವನ್ನು ನೀಡಲಾಗಿತ್ತು. ಆದರೆ, ಕೆಲವೊಂದು ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಕಾಲೇಜುಗಳು ಇದನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿಲ್ಲ. ಇದರಿಂದಾಗಿ ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್‌ಗಳಿಂದ ಮುಂಬಡ್ತಿಗೆ ಅನುಮೋದನೆ ಕೋರಿ ಬಂದ ಪ್ರಕರಣಗಳನ್ನು ಪರಿಶೀಲಿಸಲು ತೊಂದರೆಯುಂಟಾಗಿರುತ್ತದೆ.

ಆದ್ದರಿಂದ ಈ ಮೂಲಕ ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರಿಗೆ ತಿಳಿಸುವುದೇನೆಂದರೆ, ತಮ್ಮ ಸಂಸ್ಥೆಯ ಬೋಧಕ/ಬೋಧಕೇತರ ಸಿಬ್ಬಂದಿಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ದಿ: 01.01.2014 ರಲ್ಲಿರುವಂತೆ ಸಿದ್ಧಪಡಿಸಿ ತುರ್ತಾಗಿ ನಿರ್ದೇಶನಾಲಯಕ್ಕೆ ಸಲ್ಲಿಸುವಂತೆ ಈ ಮೂಲಕ ತಿಳಿಸಲಾಗಿದೆ.

ಜಂಟಿ ನಿರ್ದೇಶಕರು (ಆಡಳಿತ)
ತಾಂತ್ರಿಕ ಶಿಕ್ಷಣ ಇಲಾಖೆ.

ಇವರಿಗೆ,

ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಚಾರ್ಯರುಗಳು.

ಪ್ರತಿ:

ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಇವರಿಗೆ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಅಳವಡಿಸಲು.